ಶಾಶ್ವತ ಕುಡಿಯುವ ನೀರಿನ ಯೋಜನೆ ಬಗ್ಗೆ

124 (236): ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಕೋಲಾರ ಜಿಲ್ಲೆಗಳಲ್ಲಿ ಶಾಶ್ವತವಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದರೆ ಇದರ ರೂಪುರೇಷೆಗಳು ಏನು?

ಆ) ಎರಡು ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲಾಗುವುದು; ಇದರ ಅಂದಾಜು ವೆಚ್ಚ ಎಷ್ಟು?

ಇ) ಹಣದ ಮೂಲಗಳನ್ನು ಯಾವ ರೀತಿಯಲ್ಲಿ ಒದಗಿಸಿ ಕೊಡಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ), ಆ) ಮತ್ತು ಇ) ಈ ಎರಡು ಜಿಲ್ಲೆಗಳಲ್ಲಿ ಶಾಶ್ವತ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಗಾಗಿ ಬಹುಗ್ರಾಮ ಯೋಜನೆಗಳನ್ನು ಅನುಷ್ಠಾನ ಗೊಳಿಸಲು ಹಾಗೂ ಡೀಫ್ಲೋರಿಡೇಷನ್ ಘಟಕಗಳನ್ನು ಅಳವಡಿಸಲು ಕ್ರಮ ವಹಿಸಲಾಗಿದೆ. ತತ್ಸಂಬಂಧ ಪ್ರತ್ಯೇಕವಾಗಿ ಬಿಡುಗಡೆಯಾದ ಅನುದಾನ ಹಾಗೂ ಆಯಾ ಯೋಜನೆಗಳ ವಸ್ತುಸ್ಥಿತಿಯನ್ನು ಅನುಬಂಧ–1 ರಲ್ಲಿ ನೀಡಿದೆ.

ವಿಧಾನ ಸಭೆ ಸದಸ್ಯರಾದ ಶ್ರೀ ಶಿವಶಂಕರ ರೆಡ್ಡಿ ಎನ್.ಎಚ್. ರವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 236 ರ ಲಗತ್ತು

ಅನುಬಂಧ– 1

ಕೋಲಾರ ಜಿಲ್ಲೆ

ಕೋಲಾರ ಜಿಲ್ಲೆ ಜನರಿಗೆ ಶುದ್ಧವಾದ ಕುಡಿತಯುವ ನೀರು ಪೂರೈಸಲು ಈ ಕೆಳಕಂಡ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ.

ಜಿಲ್ಲೆಯ ಕೋಲಾರ, ಮಾಲೂರು, ಮುಳಬಾಗಿಲು ಮತ್ತು ಬಂಗಾರಪೇಟೆ ತಾಲ್ಲೂಕುಗಳಲ್ಲಿ 5 ರಿವರ್ಸ್ ಆಸ್ಮೋಸಿಸ್ ಡೀ

ಫ್ಲೋರಿಡೇಷನ್ ಘಟಕಗಳನ್ನು ಮತ್ತು 25 ಅಬ್ಸರ್ಪ್ಷನ್ ಡೀ ಫ್ಲೋರಿಡೇಷನ್ ಘಟಕಗಳನ್ನು ರೂ. 108.50 ಲಕ್ಷಗಳಲ್ಲಿ ಸ್ಥಾಪಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ಭೂ ಮೇಲ್ಮೈ ಜಲಮೂಲವನ್ನು ಪರಿಗಣಿಸಿ ಈ ಕೆಳಕಂಡ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.

1.ಮಾಲೂರು ತಾಲ್ಲೂಕಿನ ಮಾರ್ಕಂಡೇಯ ಜಲಾಶಯದಿಂದ 184 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಯನ್ನು ರೂ.3619.00 ಲಕ್ಷಗಳಲ್ಲಿ ಕೈಗೊಳ್ಳಲಾಗಿದ್ದು, ಯೋಜನೆಯು ಪ್ರಗತಿಯಲ್ಲಿದೆ. ಈ ಕಾಮಗಾರಿ ಸಂಬಂಧ ಹೈಕೋರ್ಟ್ ಡಿಸೆಂಬರ್ 2009 ರಲ್ಲಿ ನೀಡಿದ್ದ ತಡೆಯಾಜ್ಞೆ ತೆರವುಗೊಳಿಸಿದೆ. ಈಗ ಕಾಮಗಾರಿಯ ಪ್ರಗತಿಯನ್ನು ತೀವ್ರಗೊಳಿಸಲಾಗಿದೆ.

ಜಲಮೂಲ ನಿರಂತರತೆ ಕಾಪಾಡಲು ಈ ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ

ಕ್ರ.ಸಂ.	ಕುಡಿಯುವ ನೀರು ಸರಬರಾಜು ಯೋಜನೆಯ ಹೆಸರು	ಅಂದಾಜು ವೆಚ್ಚ (ರೂ. ಲಕ್ಷಗಳಲ್ಲಿ)
1.	ಕೋಲಾರ ತಾಲ್ಲೂಕಿನ ಎಸ್.ಎನ್. ಅಗ್ರಹಾರ ಜಲಾಶಯದಿಂದ 42 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ.	ರೂ. 1019.00
2.	ಶ್ರೀನಿವಾಸಪುರ ತಾಲ್ಲೂಕಿನ ಜಲಗೊಂಡನಹಳ್ಳಿ ಜಲಾಶಯದಿಂದ 72 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ.	ರೂ.1172.80
3.	ಯರಗೋಳ್ಳು ಯೋಜನೆಯಿಂದ KUWSDB ವತಿಯಿಂದ ಮಾರ್ಗ ಮಧ್ಯದ ಗ್ರಾಮಗಳನ್ನು ಅಳವಡಿಸಲು ಕ್ರಮವಹಿಸಲಾಗಿದೆ.	ರೂ.2052.16

ಚಿಕ್ಕಬಳ್ಳಾಪುರ ಜಿಲ್ಲೆ

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟಾರೆ ಕುಡಿಯುವ ನೀರಿನಲ್ಲಿ ಫ್ಲೋರೈಡ್‌ಯುಕ್ತ ಅಂಶವಿರುವ 337 ಗ್ರಾಮಗಳಿವೆ. ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರು ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ತೆಗೆದುಕೊಳ್ಳಲಾಗಿದೆ.

ಕ್ರ.ಸಂ	ತಾಲ್ಲೂಕು	ಕಾಮಗಾರಿಯ ಹೆಸರು	ಷರಾ
1	ಬಾಗೇಪಲ್ಲಿ	ವಂಡಮಾನ್ ಕೆರೆಯಿಂದ 75 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು.	ಕಾಮಗಾರಿ ಪ್ರಗತಿಯಲ್ಲಿದೆ. ರೂ. 775.00 ಲಕ್ಷ ವೆಚ್ಚವಾಗಿದೆ
2.	ಬಾಗೇಪಲ್ಲಿ	ಪರಗೋಡು ಜಲಾಶಯದಿಂದ 75 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು.	ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ ವತಿಯಿಂದ ಕಾಮಗಾರಿ ಪ್ರಾರಂಭವಾಗಿದ್ದು ಪ್ರಗತಿಯಲ್ಲಿದೆ. ರೂ. 1324.00 ಲಕ್ಷ ವೆಚ್ಚವಾಗಿದೆ.
3.	ಬಾಗೇಪಲ್ಲಿ	ತಾಕಿನ 44 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು.	ಸದರಿ ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಸಮಾಲೋಚಕರಿಂದ ಸಮೀಕ್ಷೆ ನಡೆಸಲು ಕ್ರಮ ಕೈಗೊಳ್ಳಲಾಗಿದೆ.
4.	ಬಾಗೇಪಲ್ಲಿ	ಬಾಗೇಪಲ್ಲಿ ತಾಲ್ಲೂಕಿನ 13 ಡೀಫ್ಲೋರಿಡೇಷನ್ ಘಟಕಗಳ ಅಳವಡಿಕೆ	13 ಡಿ.ಎಫ್. ಘಟಕಗಳಲ್ಲಿ 13 ಘಟಕಗಳನ್ನು ದುರಸ್ತಿಗೊಳಿಸಲು ಕ್ರಮ ಕೈಗೊಂಡಿದ್ದು, ಅವುಗಳು ಕಾರ್ಯ ನಿರ್ವಹಿಸುತ್ತಿವೆ. ಈ ಸಂಬಂಧ ರೂ. 58.50 ಲಕ್ಷ ಬಿಡುಗಡೆಯಾಗಿದೆ.
5.	ಬಾಗೇಪಲ್ಲಿ	26 ಗ್ರಾಮಗಳಲ್ಲಿ ಸಚೇತನ (BAIF) ಯೋಜನೆಯಡಿ ಮಳೆ ನೀರು ಕೊಯ್ಲು.	ಕಾಮಗಾರಿ ಪ್ರಗತಿಯಲ್ಲಿದೆ. ಈ ವರೆಗೂ ರೂ. 285.11 ಲಕ್ಷಗಳು ಬಿಡುಗಡೆಯಾಗಿದ್ದು, ರೂ. 234.42 ಲಕ್ಷಗಳಷ್ಟು ವೆಚ್ಚವಾಗಿದೆ.
6.	ಗುಡಿಬಂಡೆ	ಪರಗೋಡು ಜಲಾಶಯದಿಂದ 53 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ (ಕನನೀಸ & ಒ.ಮಂ ವತಿಯಿಂದ ನಿರ್ವಹಣೆ).	ಕರ್ನಾಟಕ ನಗರ ನೀರು ಸರಬರಾಜು & ಒಳಚರಂಡಿ ಮಂಡಳಿ ವತಿಯಿಂದ ಕಾಮಗಾರಿ ಪ್ರಾರಂಭವಾಗಿದೆ.

7.	ಚಿಕ್ಕಬಳ್ಳಾಪುರ	ಜಕ್ಕಲಮಡುಗು ಜಲಾಶಯದಿಂದ ಚಿಕ್ಕಬಳ್ಳಾಪುರ ಪಟ್ಟಣಕ್ಕೆ ನೀರು ಸರಬರಾಜು ಯೋಜನೆಯ ಮಾರ್ಗ ಮಧ್ಯದ 10 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ.	10 ಗ್ರಾಮಗಳಿಗೆ (ಕ.ನ.ನೀ.ಸ. & ಒ.ಮಂ. ವತಿಯಿಂದ ಕಾಮಗಾರಿ ಪ್ರಾರಂಭವಾಗಿದೆ.

ಬೆಳ್ತಂಗಡಿ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ನಿಧಿಯ ಅನುದಾನದ ಬಗ್ಗೆ

125 (220) ಶ್ರೀ ವಸಂತಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೇ?

ಅ) 2008–09, 2009–10 ಮತ್ತು 2010–11ರ ಸಾಲಿನಲ್ಲಿ ಬೆಳ್ತಂಗಡಿ ತಾಲ್ಲೂಕಿನ ಉಜಿರೆ ಮತ್ತು ಲಾಯಿಲ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ನಿಧಿಯಿಂದ ಯಾವ ಕಾಮಗಾರಿಗಳಿಗೆ ಎಷ್ಟು ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ; (ಲೆಕ್ಕ ಶೀರ್ಷಿಕೆವಾರು ವಿವರ ನೀಡುವುದು);

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಮಾಹಿತಿಯನ್ನು ಅನುಬಂಧ–1, 2 ಮತ್ತು 3ರಲ್ಲಿ ಒದಗಿಸಲಾಗಿದೆ.